ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೆಯ ಅಧಿವೇಶನ

(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ: 24ನೇ ಮಾರ್ಚ್, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

******

01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾರನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾರನೆಯ ಪಟ್ಟಿ

02. ಅರ್ಜಿಗಳನ್ನೊಪ್ಪಿಸುವುದು

ಅ) **ಶ್ರೀ ಅಬ್ದುಲ್ ಜಬ್ಬಾರ್** ಅವರು ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು, ನಗರ ಯೋಜನಾ ಸದಸ್ಯರು ಹಾಗೂ ನಗರ ಯೋಜಕರು ಸರ್ಕಾರಿ ಆದೇಶಗಳನ್ನು ಪಾಲಿಸದೆ ಸರ್ಕಾರ ಹಾಗೂ ಪ್ರಾಧಿಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವುಂಟು ಮಾಡಿ, ಅಧಿಕಾರ ದುರುಪಯೋಗ ಪಡಿಸಿಕೊಂಡಿರುವವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

ಆ) **ಶ್ರೀ ಡಿ.ಎಸ್. ವೀರಯ್ಯ** ಅವರು ಕೋಲಾರ ಜಿಲ್ಲಾ ಪಂಚಾಯತ್‌ನಲ್ಲಿ ಸರ್ಕಾರಿ ಆದೇಶಗಳನ್ನು ಪಾಲಿಸದೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

03. ಗಮನ ಸೆಳೆಯುವ ಸೂಚನೆಗಳು

ಅ) ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಅವರು ರಾಜ್ಯದ ಗ್ರಾಮೀಣಾ ಭಾಗದ ಬಡ ವಿದ್ಯಾರ್ಥಿಗಳಿಗೆ ಸಿ.ಇ.ಟಿ. ತರಬೇತಿಯನ್ನು ಆಯಾಯ ಕಾಲೇಜುಗಳಲ್ಲಿಯೇ ನುರಿತ ಬೋಧನಾ ಸಿಬ್ಬಂದಿಗಳಿಂದ ನೀಡುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ** ಗಮನ ಸೆಳೆಯುವುದು.

..2

ಆ) ಶ್ರೀಯುತರುಗಳಾದ: ಎಸ್.ವ್ಹಿ. ಸಂಕನೂರ, ಅಮರನಾಥ ಪಾಟೀಲ್, ವೈ.ಎ. ನಾರಾಯಣಸ್ವಾಮಿ ಮತ್ತು ಪ್ರೊ: ಪಿ.ವಿ ಕೃಷ್ಣಭಟ್ಟ ಅವರುಗಳು ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ ವೇತನ, ನಿವೃತ್ತಿ ವೇತನ, ಮತ್ತು ಇನ್ನಿತರ ಸೌಲಭ್ಯಗಳನ್ನು ಅನುಷ್ಠಾನಗೊಳಿಸದೆ, ಕಾಲೇಜು ಶಿಕ್ಷಣ ಇಲಾಖೆಯು ವೇತನ ಮರುನಿಗದಿಪಡಿಸಿದ ನಂತರವೇ ಸಿಬ್ಬಂದಿಗಳ ವೇತನವನ್ನು ಬಿಡುಗಡೆ ಮಾಡಲು ಸುತ್ತೋಲೆ ಹೊರಡಿಸಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ** ಗಮನ ಸೆಳೆಯುವುದು.

ಇ) ಶ್ರೀಯುತರುಗಳಾದ: ಅಲ್ಲಮಪ್ರಭು ಪಾಟೀಲ್ ಹಾಗೂ ಎಸ್.ವ್ಹಿ. ಸಂಕನೂರ ಅವರುಗಳು ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಗ್ರಾಮ ಪಂಚಾಯಿತಿಯ ಗ್ರಂಥಾಲಯಗಳಲ್ಲಿ ಮೇಲ್ವಿಚಾರಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳಿಗೆ ಕನಿಷ್ಠ ವೇತನ ಹಾಗೂ ವ್ಯತ್ಯಾಸದ ವೇತನವನ್ನು ನೀಡದಿರುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ** ಗಮನ ಸೆಳೆಯುವುದು.

04. ನಿಯಮ 330ರ ಮೇರೆಗೆ

ಅ) ಶ್ರೀಮತಿ ವಿಮಲಾಗೌಡ ಅವರು ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆಗಳು ನಿರಂತರವಾಗಿ ನಡೆಯುತ್ತಿದ್ದು, ಇಂತಹ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಯಾವುದೇ ಕ್ರಮ ಜರುಗಿಸದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಆ) ಶ್ರೀ ಮರಿತಿಬ್ಬೇಗೌಡ ಅವರು ಮಂಡ್ಯ ಜಿಲ್ಲಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿನ ಔಷಧಿಗಳ ಖರೀದಿಯಲ್ಲಿ ನಡೆದಿರುವ ಅವ್ಯವಹಾರ ಹಾಗೂ ನಿರ್ದೇಶಕರ ಹುದ್ದೆಗೆ ಆಯ್ಕೆ ಸಮಿತಿಯು ನಿಯಮ ಬಾಹಿರವಾಗಿ ಅನುಮೋದನೆ ನೀಡಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು)**

05. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ

ಶ್ರೀಯುತರುಗಳಾದ:
ಕೆ.ಎಸ್. ಈಶ್ವರಪ್ಪ, ವಿ.ಪ.ನಾ,
ಕ್ಯಾಪ್ಟನ್ ಗಣೇಶ್ ಕಾರ್ಣಿಕ್,
ಬಿ.ಜೆ. ಪುಟ್ಟಸ್ವಾಮಿ ,
ಆರ್.ಕೆ. ಸಿದ್ದರಾಮಣ್ಣ
ಹಾಗೂ
ಡಿ.ಎಸ್. ವೀರಯ್ಯ

ರಾಜ್ಯ ಸರ್ಕಾರ ಕೈಗೊಳ್ಳಲಿರುವ ಜಾತಿ ಸಮೀಕ್ಷೆ ನಡೆಸಲು ತಯಾರಿಸಲಾಗಿರುವ ಜಾತಿ ಮತ್ತು ಉಪ ಜಾತಿಗಳ ಹೆಸರನ್ನು ಮುದ್ರಿಸುವಲ್ಲಿ ಉಂಟಾಗಿರುವ ಗೊಂದಲದ ಬಗ್ಗೆ ಪ್ರಸ್ತಾಪಿಸುವುದು.

ವಿ. ಶ್ರೀಶ್
ಕಾರ್ಯದರ್ಶಿ